1942 (2285) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ):– ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಗ್ರಾಮೀಣ ಬಸ್ ನಿಲ್ದಾಣಗಳಿವೆ; (ಗ್ರಾಮವಾರು ವಿವರಗಳನ್ನು ಒದಗಿಸುವುದು) ;

ಆ) ಈ ಪೈಕಿ ಎಷ್ಟು ಬಸ್ ನಿಲ್ದಾಣಗಳಿಗೆ ಸ್ವಂತ ಕಟ್ಟಡವಿದೆ;

ಇ) ಈ ಸಾಲಿನಲ್ಲಿ ಬಸವಕಲ್ಯಾಣ ತಾಲ್ಲೂಕಿನಲ್ಲಿ ಎಷ್ಟು ಹೊಸ ಬಸ್ ನಿಲ್ದಾಣಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ;

ಈ) ರಾಜೇಶ್ವರ ಗ್ರಾಮದಲ್ಲಿರುವ ಬಸ್ ನಿಲ್ದಾಣವು ಕಟ್ಟಡದ ಕೊರತೆಯನ್ನು ಇದುರಿಸುತ್ತಿದ್ದು ಈಗ ಶಾಲಾ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಈ ವ್ಯವಸ್ಥೆಯಿಂದ ಶಾಲಾ ಮಕ್ಕಳಿಗೂ ತೊಂದರೆ ಹಾಗೂ ಪ್ರಯಾಣಿಕರಿಗೂ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಹಾಗಿದ್ದಲ್ಲಿ, ರಾಜೇಶ್ವರ ಗ್ರಾಮಕ್ಕೆ ಸ್ವಂತ ಬಸ್ ನಿಲ್ದಾಣವನ್ನು ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎನ್.ಚಲುವರಾಯಸ್ವಾಮಿ (ಸಾರಿಗೆ ಸಚಿವರು) :

ಅ) ಬಸವಕಲ್ಯಾಣ ವಿಧಾನಸಭಾ ಕ್ಷೇತ್ರದಲ್ಲಿ ಎರಡು ಗ್ರಾಮೀಣ ಬಸ್ ನಿಲ್ದಾಣಗಳಿವೆ. (1) ಮುಡುಬಿ (2) ರಾಜೇಶ್ವರ.

ಆ) ಮುಡಬಿಯಲ್ಲಿರುವ ಬಸ್ ನಿಲ್ದಾಣ ಸ್ವಂತ ಕಟ್ಟಡವನ್ನು ಹೊಂದಿರುತ್ತದೆ.

ಇ) ಬಸವಕಲ್ಯಾಣ ತಾಲ್ಲೂಕಿನ ರಾಜೇಶ್ವರ ಗ್ರಾಮದಲ್ಲಿ ಬಸ್ ನಿಲ್ದಾಣ ಸ್ಥಾಪಿಸುವ ಪ್ರಸ್ತಾವನೆ ಇದೆ.

ಈ) ಹೌದು.

ಉ) ಹೌದು.

ಊ) ಸ್ವಂತ ಬಸ್ ನಿಲ್ದಾಣವನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು.

1943 (2286) ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ):– ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ವಕ್ಫ್ ಸಂಸ್ಥೆಯಿಂದ ಪ್ರತಿ ಜಿಲ್ಲೆಗೆ ನೀಡಲಾಗಿರುವ ಅನುದಾನವೆಷ್ಟು;